೩. ವಿಧವಾ ಮಾಸಾಶನ :

೧. ವಿಧವೆಯಾಗಿರಬೇಕು.

೨. ೧೮ ವರ್ಷಕ್ಕೂ ಮೇಲ್ಪಟ್ಟು ವಯಸ್ಕಳಾಗಿರಬೇಕು.

೩. ವಾರ್ಷಿಕ ಆದಾಯ ೧೫೦೦ ರೂ. ಗಳಿಗೆ ಮೀರಿರಬಾರದು.

೪. ಈ ಮಾಸಾಶನವನ್ನು ವ್ಯಾತರಾಗುವವರೆವಿಗೆ ಅಥವಾ ಪುನರ್ ವಿವಾಹವಾಗುವ ತರೆವಿಗೆ ಪಾವತಿ ಮಾಡಲಾಗುತ್ತದೆ.

೪) ಜಿಲ್ಲಾವಾರು ಸಮೀಕ್ಷೆ ನಡೆಸಲು ಈಗಾಗಲೇ ಎಲ್ಲಾ ಜಿಲ್ಲಾಧಿಕಾರಿಗಳಿಗೂ ಆದೇಶ ನೀಡ ಲಾಗಿದೆ. ಕಾನೂನಿಗೆ ಅನುಗುಣವಾಗಿಲ್ಲದ ಮಾಸಾಶನಿಗಳು ಕಂಡುಬಂದಲ್ಲಿ ಅಂತಹವರ ವೇತನ ನಿಲ್ಲಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ರಾಜ್ಯದಲ್ಲಿ ಸರ್ಕಾರದಿಂದ ನಡೆಸಲ್ಪಡುವ ಹರಿಜನ-ಗಿರಿಜನ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳ ಬಗ್ಗೆ

೮೭೮ (೫). ವಸಂತ ಬಂಗೇರ (ಬೆಳ್ತಂಗಡಿ).—ಮಾನ್ಯ ಸಮಾಜ ಕಲ್ಯಾಣ ಮಂತ್ರಿಗಳು ಈ ಕೆಳ ಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

೮) ರಾಜ್ಯದಲ್ಲಿ ಸರಕಾರದಿಂದ ನಡೆಸಲ್ಪಡುವ ಹರಿಜನ-ಗಿರಿಜನ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳಿಗೆ ಸರ್ಕಾರದಿಂದ ಕೊಡುತ್ತಿರುವ ಹಣ ಸಾಕಾಗದಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

೮) ಸದರಿ ವಿದ್ಯಾರ್ಥಿನಿಲಯದ ವಿದ್ಯಾರ್ಥಿಗಳಿಗೆ ಸರ್ಕಾರದಿಂದ ಕೊಡಲ್ಪಡುವ ಯಾವುದೇ ಸವಲತ್ತುಗಳು ವಿದ್ಯಾರ್ಥಿಗಳಿಗೆ ದೊರೆಯದಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

೩) ಸದರಿ ತೊಂದರೆಗಳನ್ನು ನಿವಾರಿಸಲು ಸರ್ಕಾರದವರು ಕೈಗೊಂಡ ಕ್ರಮಗಳೇನು,

೪) ರಾಜ್ಯದಲ್ಲಿರುವ ಇನ್ನೂ ಹೆಚ್ಚಿನ ಬಡ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಹೆಚ್ಚು ವಿದ್ಯಾರ್ಥಿನಿಲಯಗಳನ್ನು ತೆರೆಯಲಾಗುವುದೇ ?

ಶ್ರೀ ಜಿ. ಬಸವಣೆಪ್ಪ (ಸಮಾಜ ಕಲ್ಯಾಣ ಸಚಿವರು).—

೮) ಬಂದಿದೆ.

೮) ಈ ಬಗ್ಗೆ ದೂರುಗಳಿಲ್ಲ.

೩) ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡಗಳನ್ನು ಕಟ್ಟಲು ಆದಷ್ಟು ಕ್ರಮ ಕೈಗೊಳ್ಳಲಾಗು ತ್ತಿದೆ. ಈ ಸಾಲಿನಲ್ಲಿ ೧೦೦ ಕಟ್ಟಡಗಳನ್ನು ಪರಿಶಿಷ್ಟ ಜಾತಿಯವರಿಗಾಗಿ ಕಟ್ಟಲು ಈಗಾಗಲೇ ಕ್ರಮ ಕೈಗೊಳ್ಳಲಾಗಿದೆ. ೫೩ ಕಟ್ಟಡಗಳನ್ನು ಕಟ್ಟಲು ಎನ್.ಆರ್.ಇ.ಪಿ. ಮತ್ತು ಜಿಲ್ಲಾ ಉಪಯೋಜನೆ ಗಳಲ್ಲಿ ಜಿಲ್ಲಾಧಿಕಾರಿಗಳು ಕ್ರಮ ಕೈಗೊಂಡಿರುತ್ತಾರೆ. ವಿದ್ಯಾರ್ಥಿನಿಲಯಗಳನ್ನು ವ್ಯವಸ್ಥಿತವಾಗಿ ನಡೆಸಿ ಕೊಂಡು ಹೋಗಲು ಜಿಲ್ಲಾಧಿಕಾರಿಗಳು ಹಾಗೂ ಇಲಾಖೆಯ ಅಧಿಕಾರಿಗಳು ಆಗಿಂದಾಗ್ಗೆ ತನಿಖೆ ನಡೆಸಿ ನ್ಯೂನತೆಗಳನ್ನು ಸರಿಪಡಿಸಲು ಕ್ರಮ ಕೈಗೊಳ್ಳುವರು.

೪) ಆಯವ್ಯಯದಲ್ಲಿ ಭರಿಸಲಾದ ಹಣವನ್ನು ಅವಲಂಬಿಸಿ ಹಂತ ಹಂತವಾಗಿ ನಿಲಯಗಳನ್ನು ತೆರೆಯಲು ಹಾಗೂ ಇತರ ಸೌಲಭ್ಯಗಳನ್ನು ಒದಗಿಸಲು ಕ್ರಮಕೈಗೊಳ್ಳಲಾಗುವುದು.